# Akashvani : Bangalore
# National Bulletin In Kannada

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**21.09.2024 / 19.35 hrs**

ಮುಖ್ಯಾಂಶಗಳು

೧. ಅಮೆರಿಕ ಅಧ್ಯಕ್ಷ ಜೋ ಬೈಡನ್ ಅವರೊಂದಿಗೆ ಪ್ರಧಾನಿ ನರೇಂದ್ರ ಮೋದಿ ಇಂದು ದ್ವಿಪಕ್ಷೀಯ ಮಾತುಕತೆ

೨. ದೆಹಲಿ ಮುಖ್ಯಮಂತ್ರಿಯಾಗಿ ಅತಿಶಿ ಪ್ರಮಾಣ ವಚನ ಸ್ವೀಕಾರ

೩. ಜಮ್ಮು-ಕಾಶ್ಮೀರ ವಿಧಾನಸಭಾ ಚುನಾವಣೆ; ಎರಡನೇ ಹಂತದ ಮತದಾನಕ್ಕೆ ರಂಗೇರಿದ ಚುನಾವಣಾ ಕಣ

೪. ಶ್ರೀಲಂಕಾ ಅಧ್ಯಕೀಯ ಚುನಾವಣೆ ಮತದಾನ ಶಾಂತಿಯುತ

೫. ಟೆಸ್ಟ್ ಕ್ರಿಕೆಟ್: ಬಾಂಗ್ಲಾದೇಶ ವಿರುದ್ಧ ಗೆಲುವಿನ ಸನಿಹದಲ್ಲಿ ಭಾರತ

<><*<><>*><>

ಅಮೆರಿಕ ಪ್ರವಾಸದಲ್ಲಿರುವ ಪ್ರಧಾನಿ ನರೇಂದ್ರ ಮೋದಿ ಅವರು, ಡೆಲವೇರ್‌ನ ವಿಲ್ಮಿಂಗ್ಟನ್‌ನಲ್ಲಿ ಇಂದು ರಾತ್ರಿ ಅಮೆರಿಕ ಅಧ್ಯಕ್ಷ ಜೋ ಬೈಡನ್ ಅವರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಲಿದ್ದಾರೆ. ವಿವಿಧ ವಿಷಯಗಳ ಕುರಿತು ಉಭಯ ನಾಯಕರು ಉನ್ನತ ಮಟ್ಟದ ಸಭೆ ನಡೆಸಲಿದ್ದಾರೆ. ನಂತರ ೬ನೇ ವಾರ್ಷಿಕ ಕ್ವಾಡ್ ನಾಯಕರ ಶೃಂಗಸಭೆಯಲ್ಲಿ ಪಾಲ್ಗೊಳ್ಳಲಿದ್ದಾರೆ. ಇದೇ ಸಂದರ್ಭದಲ್ಲಿ ಅವರು, ವಿಶ್ವದ ಹಲವು ನಾಯಕರೊಂದಿಗೆ ದ್ವಿಪಕ್ಷೀಯ ಸಭೆಯಲ್ಲಿ ಭಾಗವಹಿಸಲಿದ್ದಾರೆ. ಪ್ರಧಾನಿಯವರ ಅಮೆರಿಕ ಭೇಟಿಯು, ಅನೇಕ ದ್ವಿಪಕ್ಷೀಯ ಮತ್ತು ಬಹುಪಕ್ಷೀಯ ಅಂಶಗಳನ್ನು ಒಳಗೊಂಡಿದೆ. ಪ್ರಧಾನಿಯವರು ಅನೇಕ ವ್ಯಾಪಾರ ಮತ್ತು ಉದ್ಯಮದ ಪ್ರಮುಖರೊಂದಿಗೂ ಮಾತುಕತೆ ನಡೆಸಲಿದ್ದಾರೆ. ಇದಲ್ಲದೆ, ನ್ಯೂಯಾರ್ಕ್‌ನಲ್ಲಿರುವ ಪ್ರಮುಖ ಅಮೆರಿಕನ್ ಕಂಪನಿಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳೊಂದಿಗೆ ಮಾತುಕತೆ ನಡೆಸುವ ನಿರೀಕ್ಷೆ ಇದೆ. ಮುಂದಿನ ಕ್ವಾಡ್ ನಾಯಕರ ಶೃಂಗಸಭೆ ೨೦೨೫ರಲ್ಲಿ ಭಾರತದ ಆತಿಥ್ಯದಲ್ಲಿ ನಡೆಯಲಿದೆ. ತಮ್ಮ ಪ್ರವಾಸ ಆರಂಭಕ್ಕೂ ಮುನ್ನ ಹೇಳಿಕೆ ಬಿಡುಗಡೆ ಮಾಡಿರುವ ಪ್ರಧಾನಿ, ಅಮೆರಿಕ ಅಧ್ಯಕ್ಷ ಜೋ ಬೈಡೆನ್, ಆಸ್ಟ್ರೇಲಿಯಾ ಪ್ರಧಾನಿ ಆಂತೋನಿ ಅಲ್ಬನೀಸ್ ಮತ್ತು ಜಪಾನ್ ಪ್ರಧಾನಿ ಫುಮಿಯೋ ಕಿಶಿದಾ ಅವರ ಜೊತೆ ಕ್ವಾಡ್ ಶೃಂಗಸಭೆ ಸಂದರ್ಭದಲ್ಲಿ ದ್ವಿಪಕ್ಷೀಯ ಬಾಂಧವ್ಯ ಬಲವರ್ಧನೆ ಕುರಿತು ಚರ್ಚಿಸಲಾಗುವುದು. ಭಾರತ ಫೆಸಿಫಿಕ್ ವಲಯದಲ್ಲಿ ಶಾಂತಿ, ಪ್ರಗತಿ, ಸಮೃದ್ಧತೆ ತರುವ ನಿಟ್ಟಿನಲ್ಲಿ ಕಾರ್ಯ ನಿರ್ವಹಿಸುವುದಾಗಿ ಹೇಳಿದ್ದಾರೆ. ಅಮೆರಿಕ ಅಧ್ಯಕ್ಷರೊಂದಿಗೆ ನಡೆಯಲಿರುವ ದ್ವಿಪಕ್ಷೀಯ ಸಮಾಲೋಚನೆಯಲ್ಲಿ ಎರಡೂ ದೇಶಗಳು ಹೊಸ ಹಾದಿಯಲ್ಲಿ ಸಾಗಬೇಕಿರುವ ವಲಯಗಳ ಕುರಿತು ಆಳವಾದ ಚರ್ಚೆ ನಡೆಯಲಿದೆ. ಜಾಗತಿಕ ಕಾರ್ಯತಂತ್ರ ಸಹಭಾಗಿತ್ವ ವಲಯದಲ್ಲಿ ಎರಡೂ ದೇಶಗಳಿಗೂ ಲಾಭವಾಗುವ ಮತ್ತು ಜಾಗತಿಕವಾಗಿ ಉತ್ತಮ ವಾತಾವರಣ ನಿರ್ಮಿಸುವ ಕುರಿತಂತೆ ಚರ್ಚಿಸಲಾಗುವುದು ಎಂದು ಪ್ರಧಾನಿ ಹೇಳಿದ್ದಾರೆ. ನಾಳೆ ಪ್ರಧಾನಮಂತ್ರಿ ಅವರು, ನ್ಯೂಯಾರ್ಕ್‌ನಲ್ಲಿ ಭಾರತೀಯ ಸಮುದಾಯದೊಂದಿಗೆ ಸಂವಾದ ನಡೆಸಲಿದ್ದಾರೆ. ಅತ್ಯಾಧುನಿಕ ತಂತ್ರಜ್ಞಾನ, ಕೃತಕ ಬುದ್ಧಿಮತ್ತೆ, ಕ್ವಾಂಟಮ್ ಕಂಪ್ಯೂಟಿಂಗ್, ಸೆಮಿಕಂಡಕ್ಟರ್ ವಲಯದಲ್ಲಿ ಅಮೆರಿಕದ ಕಂಪನಿಗಳೊಂದಿಗೆ ಸಂವಾದ ನಡೆಸಲಿರುವುದಾಗಿ ತಿಳಿಸಿದ್ದಾರೆ. ಭಾರತೀಯ ಸಮುದಾಯ ಮತ್ತು ಅಮೆರಿಕ ಉದ್ದಿಮೆದಾರರೊಂದಿಗೆ ಚರ್ಚೆಯನ್ನು ತಾವು ಎದುರು ನೋಡುತ್ತಿರುವುದಾಗಿ ತಿಳಿಸಿದ್ದಾರೆ. ಬಳಿಕ ನರೇಂದ್ರ ಮೋದಿ ಅವರು, ವಿಶ್ವಸಂಸ್ಥೆಯ ಸಾಮಾನ್ಯ ಅಧಿವೇಶನದಲ್ಲಿ ಭವಿಷ್ಯದ ಶೃಂಗಸಭೆ ವಿಷಯ ಕುರಿತು ಭಾಷಣ ಮಾಡಲಿದ್ದಾರೆ. ಉತ್ತಮ ನಾಳೆಗಾಗಿ ಬಹುಹಂತದ ಪರಿಹಾರ ಎಂಬುದು ಈ ಶೃಂಗಸಭೆಯ ಧ್ಯೇಯ ವಾಕ್ಯವಾಗಿದೆ.

<><*<><>*><>

ಆಮ್ ಆದ್ಮಿ ಪಕ್ಷದ ಹಿರಿಯ ನಾಯಕಿ ಅತಿಶಿ ಇಂದು ದೆಹಲಿ ಮುಖ್ಯಮಂತ್ರಿಯಾಗಿ ಪ್ರಮಾಣ ವಚನ ಸ್ವೀಕರಿಸಿದರು. ದೆಹಲಿ ಲೆಫ್ಟಿನೆಂಟ್ ಗೌರ್ನರ್ ವಿ.ಕೆ.ಸಕ್ಸೇನಾ ಅವರು, ಮುಖ್ಯಮಂತ್ರಿ ಮತ್ತು ಮಂತ್ರಿಮಂಡಲದ ಸದಸ್ಯರಿಗೆ ಗೌಪತ್ಯಾ ಪ್ರತಿಜ್ಞಾವಿಧಿ ಬೋಧಿಸಿದರು. ದೆಹಲಿಯ ರಾಜನಿವಾಸದಲ್ಲಿ ಇಂದು

ಮಧ್ಯಾಹ್ನ ನಡೆದ ಸಮಾರಂಭದಲ್ಲಿ ಆಪ್ ನಾಯಕರಾದ ಗೋಪಾಲ್ ರೈ, ಕೈಲಾಶ್ ಗೆಹ್ಲೋಟ್, ಸೌರಭ್ ಭಾರದ್ವಜ್, ಇಮ್ರಾನ್ ಹುಸೇನ್ ಮತ್ತು ಮುಕೇಶ್ ಅಹಲಾವತ್ ಸಂಪುಟ ದರ್ಜೆ ಸಚಿವರಾಗಿ ಪ್ರಮಾಣವಚನ ಸ್ವೀಕರಿಸಿದರು. ಕಲ್ಕಜಿ ವಿಧಾನಸಭಾ ಕ್ಷೇತ್ರದ ಶಾಸಕಿಯಾಗಿರುವ ಅತಿಶಿ ಅವರು, ದೆಹಲಿಯ ಮೂರನೇ ಮಹಿಳಾ ಮುಖ್ಯಮಂತ್ರಿಯಾಗಿದ್ದಾರೆ. ಈ ಹಿಂದೆ ಬಿಜೆಪಿಯ ಸುಷ್ಮಾ ಸ್ವರಾಜ್, ಕಾಂಗ್ರೆಸ್‌ನ ಶೀಲಾ ದೀಕ್ಷಿತ್ ದೆಹಲಿ ಮುಖ್ಯಮಂತ್ರಿಯಾಗಿದ್ದರು. ಕೆಲವು ದಿನಗಳ ಹಿಂದೆ ಜಾಮೀನಿನ ಮೇಲೆ ಜೈಲಿನಿಂದ ಬಿಡುಗಡೆಯಾದ ಅರವಿಂದ್ ಕೇಜ್ರಿವಾಲ್ ತಮ್ಮ ಸ್ಥಾನಕ್ಕೆ ರಾಜೀನಾಮೆ ಸಲ್ಲಿಸಿದ್ದರು.

<><*<><>*><>

ಇದೇ ತಿಂಗಳ ೨೫ ಹಾಗೂ ೨೬ ರಂದು ನಡೆಯಲಿರುವ ಜಮ್ಮು-ಕಾಶ್ಮೀರದ ಎರಡನೇ ಹಂತದ ವಿಧಾನಸಭಾ ಚುನಾವಣೆ ಹಿನ್ನೆಲೆ, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಜುಮ್ಮುವಿನಲ್ಲಿಂದು ಪಕ್ಷದ ಅಭ್ಯರ್ಥಿಗಳ ಪರ ಪ್ರಚಾರ ನಡೆಸಿದರು. ಪ್ರಚಾರದ ವೇಳೆ ಮಾತನಾಡಿದ ಅವರು, ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ವಿರುದ್ಧ ಅವಹೇಳನಕಾರಿ ಹೇಳಿಕೆ ನೀಡಿರುವ ಬಿಜೆಪಿ ನಾಯಕರ ವಿರುದ್ಧ ಕ್ರಮ ಕೈಗೊಳ್ಳಲು ಪ್ರಧಾನಿ ನರೇಂದ್ರ ಮೋದಿ ವಿಫಲರಾಗಿದ್ದಾರೆ ಎಂದು ಅವರು ದೂರಿದರು. ಬಿಜೆಪಿ ಮತ್ತು ಆರ್‌ಎಸ್‌ಎಸ್ ನಾಯಕರ ಪ್ರಚೋದನಕಾರಿ ಭಾಷಣಗಳನ್ನು ಪ್ರಧಾನಿಯವರು ನಿರ್ಲಕ್ಷಿಸಿದ್ದು, ಅವರ ವಿರುದ್ಧ ಯಾವುದೇ ಕ್ರಮ ಕೈಗೊಂಡಿಲ್ಲ ಎಂದು ಮಲ್ಲಿಕಾರ್ಜುನ ಖರ್ಗೆ ಆರೋಪಿಸಿದರು.

<><*<><>*><>

ಪ್ರಧಾನಿ ನರೇಂದ್ರ ಮೋದಿ ಅವರ ನಾಯಕತ್ವದಲ್ಲಿ ಜಮ್ಮು ಮತ್ತು ಕಾಶ್ಮೀರವು ಭಯೋತ್ಪಾದನೆಯಿಂದ ಶಾಂತಿಯತ್ತ ಸಾಗುತ್ತಿರುವ ಅದ್ಭುತವಾದ ಪರಿವರ್ತನೆಯನ್ನು ಕಂಡಿದೆ ಎಂದು ಕೇಂದ್ರ ಗೃಹ ಸಚಿವ ಮತ್ತು ಬಿಜೆಪಿ ಹಿರಿಯ ನಾಯಕ ಅಮಿತ್ ಶಾ ಹೇಳಿದ್ದಾರೆ. ಜಮ್ಮು ಮತ್ತು ಕಾಶ್ಮೀರದ ಪೂಂಚ್ ಜಿಲ್ಲೆಯ ಮೆಂದಾರ್‌ನಲ್ಲಿ ಇಂದು ನಡೆದ ಪ್ರಚಾರ ರ್‍ಯಾಲಿ ಉದ್ದೇಶಿಸಿ ಮಾತನಾಡಿದ ಅವರು, ಕಣಿವೆ ರಾಜ್ಯದ ಯುವಕರು, ಕಲ್ಲುಗಳ ಬದಲು ಈಗ ಲ್ಯಾಪ್‌ಟಾಪ್‌ಗಳನ್ನು ಹಿಡಿದಿದ್ದಾರೆ ಎಂದರು. ಮೂರು ಪ್ರಭಾವಿತ ಕುಟುಂಬಗಳ ಕೈಯಲ್ಲಿ ಜಮ್ಮು ಮತ್ತು ಕಾಶ್ಮೀರದಲ್ಲಿ ಪ್ರಜಾಪ್ರಭುತ್ವ ನಲುಗಿತ್ತು. ೨೦೧೪ರಲ್ಲಿ ಪ್ರಧಾನಿ ಮೋದಿ ನೇತೃತ್ವದ ಸರ್ಕಾರ ಅಧಿಕಾರಕ್ಕೆ ಬಂದ ನಂತರ, ಪ್ರಜಾಪ್ರಭುತ್ವ ಮರುಜೀವ ಪಡೆಯಿತು. ಪಂಚಾಯಿತಿ, ಬ್ಲಾಕ್ ಮತ್ತು ಜಿಲ್ಲೆಗಳ ಮಟ್ಟದಲ್ಲಿ ಚುನಾವಣೆ ನಡೆಸಲಾಯಿತು ಎಂದು ಹೇಳಿದರು. ಎನ್‌ಡಿಎ ಸರ್ಕಾರದ ಅವಿರತ ಪ್ರಯತ್ನಗಳಿಂದಾಗಿ ಇಂದು ಸಾವಿರಾರು ಕಾಶ್ಮೀರಿ ಯುವಕರು ತಮ್ಮ ಪ್ರಜಾಸತ್ತಾತ್ಮಕ ಹಕ್ಕುಗಳನ್ನು ಚಲಾಯಿಸುತ್ತಾ, ವಿವಿಧ ಹಂತಗಳಲ್ಲಿ ಚುನಾವಣೆಗೆ ಸ್ಪರ್ಧಿಸುತ್ತಿದ್ದಾರೆ ಎಂದು ಅಮಿತ್ ಶಾ ಪ್ರತಿಪಾದಿಸಿದರು.

<><*<><>*><>

ಶ್ರೀಲಂಕಾದಲ್ಲಿ ಅಧ್ಯಕ್ಷೀಯ ಸ್ಥಾನಕ್ಕೆ ಇಂದು ಶಾಂತಿಯುತವಾಗಿ ಮತದಾನ ನಡೆಯಿತು. ಸುಮಾರು ಶೇಕಡ ೭೮ ರಷ್ಟು ಮತದಾನವಾಗಿದೆ ಎಂದು ವರದಿಯಾಗಿದೆ. ೨೦೨೨ರ ಆರ್ಥಿಕ ಹಿಂಜರಿತ ನಂತರ ಶ್ರೀಲಂಕಾದಲ್ಲಿ ನಡೆಯುತ್ತಿರುವ ಮೊದಲ ಚುನಾವಣೆ ಇದಾಗಿದೆ. ೧೩ ಸಾವಿರದ ೪೦೦ ಕ್ಕೂ ಹೆಚ್ಚು ಮತಗಟ್ಟೆಗಳಲ್ಲಿ ಇಂದು ಬೆಳಗ್ಗೆ ೭ ಗಂಟೆಯಿಂದ ಸಂಜೆ ೪.೩೦ ರವರೆಗೆ ಮತದಾನ ನಡೆಯಿತು. ೬೦ ಸಾವಿರಕ್ಕೂ ಹೆಚ್ಚು ಪೊಲೀಸ್ ಸಿಬ್ಬಂದಿಯನ್ನು ಭದ್ರತೆಗಾಗಿ ನಿಯೋಜಿಸಿದ್ದು, ೧೧೬ ಅಂತಾರಾಷ್ಟ್ರೀಯ ವೀಕ್ಷಕರ ಸಮ್ಮುಖದಲ್ಲಿ ಚುನಾವಣೆ ನಡೆಯಿತು. ೩೮ ಅಭ್ಯರ್ಥಿಗಳು ಅಧ್ಯಕ್ಷೀಯ ಚುನಾವಣೆಯ ಕಣದಲ್ಲಿದ್ದಾರೆ. ಪ್ರಮುಖವಾಗಿ ಶ್ರೀಲಂಕಾದ ಹಾಲಿ ಅಧ್ಯಕ್ಷ ರಣಿಲ್ ವಿಕ್ರಮ ಸಿಂಘೆ, ಪ್ರತಿಪಕ್ಷ ನಾಯಕ ಸಜಿತ್ ಪ್ರೇಮದಾಸ್ ಹಾಗೂ ಎಡಪಂಥೀಯ ನಾಯಕ ಅನುರಕುಮಾರ ದಿಸ್ಸಾನಾಯಕೆ ಕಣದಲ್ಲಿದ್ದಾರೆ. ಇಂದು ಸಂಜೆಯಿಂದಲೇ ಮತ ಎಣಿಕೆ ಕಾರ್ಯ ನಡೆಯುತ್ತಿದೆ.

<><*<><>*><>

ಪ್ರಸ್ತುತ ವಾಯುಪಡೆಯ ಉಪ ಮುಖ್ಯಸ್ಥರಾಗಿ ಸೇವೆ ಸಲ್ಲಿಸುತ್ತಿರುವ ಏರ್ ಮಾರ್ಷಲ್ ಅಮರ್ ಪ್ರೀತ್ ಸಿಂಗ್ ಅವರನ್ನು ವಾಯುಪಡೆಯ ಮುಂದಿನ ಮುಖ್ಯಸ್ಥರನ್ನಾಗಿ ನೇಮಿಸಲಾಗಿದೆ. ಈ ತಿಂಗಳ ೩೦ ರಂದು ಅವರು, ಏರ್ ಚೀಫ್ ಮಾರ್ಷಲ್ ವಿವೇಕ್ ರಾಮ್ ಚೌಧರಿ ಅವರಿಂದ ವಾಯುಪಡೆಯ ಮುಖ್ಯಸ್ಥರಾಗಿ ಅಧಿಕಾರ ವಹಿಸಿಕೊಳ್ಳಲಿದ್ದಾರೆ. ಅಮರ್‌ಪ್ರೀತ್ ಸಿಂಗ್ ಅವರನ್ನು ಡಿಸೆಂಬರ್ ೧೯೮೪ ರಲ್ಲಿ ಭಾರತೀಯ ವಾಯುಪಡೆಯ ಫೈಟರ್ ಪೈಲಟ್ ಸ್ಟ್ರೀಮ್‌ಗೆ ನಿಯೋಜಿಸಲಾಗಿತ್ತು. ಸುಮಾರು ೪೦ ವರ್ಷಗಳ ಕಾಲ ಅವರ ಸುದೀರ್ಘ ಮತ್ತು ವಿಶಿಷ್ಟ ಸೇವೆಯ ಅವಧಿಯಲ್ಲಿ, ಅವರು ವಿವಿಧ ಕಮಾಂಡ್, ಸಿಬ್ಬಂದಿ, ಸೂಚನಾ ಮತ್ತು ವಿದೇಶಿ ನೇಮಕಾತಿಗಳಲ್ಲಿ ಸೇವೆ ಸಲ್ಲಿಸಿದ್ದಾರೆ.

<><*<><>*><>

ಭಾರತ ಮತ್ತು ಬ್ರೆಜಿಲ್ ಇಂಧನ ವಲಯದಲ್ಲಿ ಅಸ್ತಿತ್ವದಲ್ಲಿರುವ ಸಹಯೋಗ ಮುಂದುವರೆಸಲು ನಿರ್ಧರಿಸಿದ್ದು, ಸುಸ್ಥಿರ ಇಂಧನ, ಪರಸ್ಪರ ಲಾಭದಾಯಕ ಸಹಕಾರಗಳನ್ನು ಪರಿಶೀಲನೆ ನಡೆಸಿವೆ. ಕೇಂದ್ರ

ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಖಾತೆ ಸಚಿವ ಹರ್ದೀಪ್ ಸಿಂಗ್ ಪುರಿ ಮತ್ತು ಬ್ರೆಜಿಲ್ ಗಣಿ ಮತ್ತು ಇಂಧನ ಸಚಿವ ಅಲೆಕ್ಸಾಂಡ್ರೆ ಸಿಲ್ವೇರಾ ನಡುವೆ ನಡೆದ ಮಹತ್ವದ ಸಭೆ ಬಳಿಕ, ಜಂಟಿ ಹೇಳಿಕೆಯಲ್ಲಿ ಈ ವಿಚಾರವನ್ನು ಪ್ರಸ್ತಾಪಿಸಲಾಗಿದೆ. ನವೀನ ಕಾರ್ಯವಿಧಾನಗಳು ಸೇರಿದಂತೆ ಉಭಯ ದೇಶಗಳ ನಡುವಿನ ವ್ಯಾಪಾರವನ್ನು ಹೆಚ್ಚಿಸುವ ಮಾರ್ಗಗಳನ್ನು ಗುರುತಿಸುವ ಬದ್ಧತೆಯನ್ನು ಉಭಯ ನಾಯಕರು ಪುನರುಚ್ಚರಿಸಿದ್ದು, ಜಾಗತಿಕ ಜೈವಿಕ ಇಂಧನ ಒಕ್ಕೂಟದ ಸ್ಥಾಪಕ ಸದಸ್ಯರಾಗಿ, ಸುಸ್ಥಿರ ಸಾಮಾಜಿಕ, ಆರ್ಥಿಕ ಬೆಳವಣಿಗೆಯಲ್ಲಿ ನಿರ್ಣಾಯಕ ಪಾತ್ರವನ್ನು ವಹಿಸುವುದು ಅಗತ್ಯವಾಗಿದೆ. ಎಥೆನಾಲ್ ಮತ್ತು ಜೈವಿಕ ಡೀಸೆಲ್ ಉತ್ಪಾದನಾ ಮೂಲಸೌಕರ್ಯ, ಬೆಳೆಯುತ್ತಿರುವ ವಾಯುಯಾನ ಮಾರುಕಟ್ಟೆ ಮತ್ತು ಕೃಷಿ ಸಂಪನ್ಮೂಲಗಳನ್ನು ಒಳಗೊಂಡಂತೆ ಸುಸ್ಥಿರ ವಾಯುಯಾನ ಇಂಧನಗಳ ಉತ್ಪಾದನೆ ಮತ್ತು ಬಳಕೆಯಲ್ಲಿ ಉತ್ತಮ ಸಹಕಾರ ಹೊಂದಿವೆ ಎಂದಿದ್ದಾರೆ.

**<><*<><>*><>**

ಉಪರಾಷ್ಟ್ರಪತಿ ಜಗದೀಪ್ ಧನಕರ್ ಮೂರು ದಿನಗಳ ಕಾಲ ಕೇಂದ್ರಾಡಳಿತ ಪ್ರದೇಶವಾದ ದಾದ್ರಾ ಮತ್ತು ನಗರ ಹವೇಲಿ ಹಾಗೂ ದಮನ್ ಮತ್ತು ದಿಯುಗೆ ಭೇಟಿ ನೀಡಿದ್ದಾರೆ. ಕೇಂದ್ರಾಡಳಿತ ಪ್ರದೇಶಕ್ಕೆ ಉಪರಾಷ್ಟ್ರಪತಿಯವರ ಮೊದಲ ಭೇಟಿ ಇದಾಗಿದೆ. ಜಾಂಪೋರ್‌ನಲ್ಲಿ ಪಕ್ಷಿಧಾಮವನ್ನು ಉದ್ಘಾಟಿಸಿದ ಅವರು ಬಳಿಕ ದಮನ್‌ನ ಜಂಪ್ರಿನ್‌ನಲ್ಲಿರುವ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿದರು. ಇಂದು ದಾದ್ರಾ ಮತ್ತು ನಗರ್‌ಹವೇಲಿಯ ನಮೋ ವೈದ್ಯಕೀಯ ಶಿಕ್ಷಣ ಮತ್ತು ಸಂಶೋಧನಾ ಸಂಸ್ಥೆಯಲ್ಲಿ ವಿದ್ಯಾರ್ಥಿಗಳು ಮತ್ತು ಅಧ್ಯಾಪಕರೊಂದಿಗೆ ಅವರು ಸಂವಾದ ನಡೆಸಿದರು. ನಂತರ ದಿಯುನಲ್ಲಿ ಸ್ಥಳೀಯ ಚುನಾಯಿತ ಪ್ರತಿನಿಧಿಗಳೊಂದಿಗೆ ಸಂವಾದ ನಡೆಸಿದರು. ಭೇಟಿಯ ಅಂತಿಮ ದಿನದಂದು ಜಗದೀಪ್ ಧನಕರ್ ಅವರು ಘೋಘಲಾದಲ್ಲಿ ಪ್ರಧಾನ ಮಂತ್ರಿ ಆವಾಸ್ ಯೋಜನೆಯಡಿಯ ಮನೆಗಳನ್ನು ಮತ್ತು ದಿಯುನಲ್ಲಿ ಕೊಳಚೆ ನೀರಿನ ಸಂಸ್ಕರಣಾ ಘಟಕವನ್ನು ಉದ್ಘಾಟಿಸಲಿದ್ದಾರೆ.

**<><*<><>*><>**

ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವಾಲಯವು, ವನ್ಯಜೀವಿ ಆವಾಸಸ್ಥಾನಗಳ ಸಮಗ್ರ ಅಭಿವೃದ್ಧಿಯ ೧೦೦ ದಿನಗಳ ಗುರಿಯನ್ನು ಸಾಧಿಸಿದೆ. ಇತ್ತೀಚೆಗೆ ಕೇಂದ್ರ ಸಚಿವ ಸಂಪುಟ ೨ ಸಾವಿರದ ೭೦೦ ಕೋಟಿ ರೂಪಾಯಿಗಳ ವೆಚ್ಚದಲ್ಲಿ ವನ್ಯಜೀವಿ ಆವಾಸಸ್ಥಾನ ಅಭಿವೃದ್ಧಿ ಯೋಜನೆಯ ಮುಂದುವರಿಕೆಗೆ ಅನುಮೋದನೆ ನೀಡಿತ್ತು. ಯೋಜನೆಯು ಆನೆ ಮತ್ತು ವನ್ಯಜೀವಿ ಆವಾಸಸ್ಥಾನದ ಅಭಿವೃದ್ಧಿಯೊಂದಿಗೆ ನಿರ್ಣಾಯಕ ಟೈಗರ್ ಉಪ ಘಟಕವನ್ನು ಒಳಗೊಂಡಿದೆ. ಈ ಯೋಜನೆಯು ನೇರ ತೊಡಗಿಸಿಕೊಳ್ಳುವಿಕೆಯ ಮೂಲಕ ೫೦ ಲಕ್ಷಕ್ಕೂ ಹೆಚ್ಚು ಮಾನವ ದಿನಗಳ ಜೀವನೋಪಾಯವನ್ನು ಹೊಂದಿದೆ ಎಂದು ಸಚಿವಾಲಯ ಹೇಳಿದೆ.

**<><*<><>*><>**

ಚೆನ್ನೈನ ಎಂ.ಎ. ಚಿದಂಬರಂ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಮೊದಲ ಟೆಸ್ಟ್ ಕ್ರಿಕೆಟ್ ಪಂದ್ಯದ ಎರಡನೇ ಇನ್ನಿಂಗ್ಸ್‌ನಲ್ಲಿಂದು ಬಾಂಗ್ಲಾದೇಶ ದಿನದಾಟದ ಅಂತ್ಯಕ್ಕೆ ೪ ವಿಕೆಟ್ ನಷ್ಟಕ್ಕೆ ೧೫೮ ರನ್ ಗಳಿಸಿದೆ. ನಜ್ಮುಲ್ ಹೊಸೈನ್ ೫೧ ರನ್, ಶಕಿಬ್ ಅಲ್ ಹಸನ್ ೫ ರನ್ ಗಳಿಸಿ ಕಣದಲ್ಲಿದ್ದು, ಭಾರತ ಗೆಲುವಿನ ಸನಿಹದಲ್ಲಿದೆ. ಇದಕ್ಕೂ ಮುನ್ನ ಬ್ಯಾಟಿಂಗ್ ಮಾಡಿದ ಭಾರತ, ತನ್ನ ಎರಡನೇ ಇನ್ನಿಂಗ್ಸ್‌ನಲ್ಲಿ ೪ ವಿಕೆಟ್ ನಷ್ಟಕ್ಕೆ ೨೮೭ ರನ್ ಗಳಿಸಿ, ಬಾಂಗ್ಲಾದೇಶಕ್ಕೆ ಎರಡು ಪಂದ್ಯಗಳ ಸರಣಿಯ ಆರಂಭಿಕ ಪಂದ್ಯವನ್ನು ಗೆಲ್ಲಲು ೫೧೫ ರನ್‌ಗಳ ಬೃಹತ್ ಗುರಿ ಒಡ್ಡಿತು.

**<><*<> ಇಲ್ಲಿಗೆ ವಾರ್ತಾಪ್ರಸಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ <>*><>**